**All India Radio: Bangalore**
**Regional Bulletin In Kannada**
**09.02.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಬೆಂಗಳೂರಿನಲ್ಲಿ ಲೋಹದ ಹಕ್ಕಿಗಳ ಕಲರವ - ಏರೋ ಇಂಡಿಯಾ ೨೦೨೫ಕ್ಕೆ ನಾಳೆ ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್ ಚಾಲನೆ

2. ನಾಳೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ಪರೀಕ್ಷಾ ಪೇ ಚರ್ಚಾ : ಪರೀಕ್ಷಾ ಸಿದ್ಧತೆ ಕುರಿತಂತೆ ಸಲಹೆ

3. ನಾಳೆಯಿಂದ ಮೈಸೂರಿನ ತಿ.ನರಸೀಪುರದಲ್ಲಿ ಮೂರು ದಿನ ೧೩ನೇ ಕುಂಭಮೇಳ- ಅಮೃತ ಸ್ನಾನಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ

4. ಮೆಟ್ರೋ ದರ ಏರಿಕೆ ನಿರ್ಧಾರ ಹಿಂಪಡೆಯುವಂತೆ ಪ್ರತಿಪಕ್ಷ ನಾಯಕ ಆರ್ ಅಶೋಕ ಸರ್ಕಾರಕ್ಕೆ ಒತ್ತಾಯ

5. ಚಿಕ್ಕಮಗಳೂರಿನ ಆನೆಗುಡ್ಡ ಅರಣ್ಯ ವ್ಯಾಪ್ತಿಯಲ್ಲಿ ಕಾಡ್ಗಿಚ್ಚು ; ಅಪಾರ ಪ್ರಮಾಣದ ಸಸ್ಯ ಸಂಕುಲ ನಾಶ

**<><><><>**

ಏಷ್ಯಾದ ಅತಿದೊಡ್ಡ ಏರ್ ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದ ವಾಯುಪಡೆ ನಿಲ್ದಾಣದಲ್ಲಿನಾಳೆಯಿಂದಆರಂಭವಾಗಲಿದೆ.ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್, ನಾಳೆ ವೈಮಾನಿಕ ಪ್ರದರ್ಶನಕ್ಕೆ ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ. ಏರ್ ಶೋ ಹಿನ್ನೆಲೆಯಲ್ಲಿ ಈಗಾಗಲೇ ಲೋಹದ ಹಕ್ಕಿಗಳಾದ ಸೂರ್ಯ ಕಿರಣ್, ಸುಖೋಯ್ ಯುದ್ಧ ವಿಮಾನಗಳು ಈಗಾಗಲೇ ತಾಲೀಮು ನಡೆಸುತ್ತಿವೆ. ಶತ್ರುಗಳ ವಿರುದ್ಧ ರಹಸ್ಯ ಕಾರ್ಯಾಚರಣೆ ನಡೆಸಬಲ್ಲ ೫ನೇ ತಲೆಮಾರಿನ ಅತ್ಯಾಧುನಿಕ ಯುದ್ಧ ವಿಮಾನಗಳಾದ ರಷ್ಯಾ ದೇಶದ 'ಎಸ್‌ಯು-೫೭' 'ಅಮೆರಿಕದ ಎಫ್-೩೫' ಬೆಂಗಳೂರಿನ ಆಕಾಶದಲ್ಲಿ ತನ್ನ ಸಾಮರ್ಥ್ಯವನ್ನು ಪ್ರದರ್ಶಿಸಲಿದೆ.

ಈ ನಡುವೆ ಬೆಂಗಳೂರಿನಲ್ಲಿ ಏರ್ ಶೋ ಹಿನ್ನೆಲೆಯಲ್ಲಿ ವ್ಯಾಪಕ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

**<><><><>**

ಪರೀಕ್ಷೆಗಳನ್ನು ಎದುರಿಸುವ ಕುರಿತಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿವರ್ಷವೂ, ವಿದ್ಯಾರ್ಥಿಗಳೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮ ಪರೀಕ್ಷಾ ಪೇ ಚರ್ಚಾನಾಳೆಬೆಳಗ್ಗೆ ೧೧ ಗಂಟೆಗೆ ನಡಯಲಿದೆ.ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ.ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರಧಾನಮಂತ್ರಿಯವರ ಸಂವಾದ ಕಾರ್ಯಕ್ರಮವನ್ನು ದೂರದರ್ಶನ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು. ೨೦೧೮ರಲ್ಲಿ ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ.

**<><><><>**

ದಕ್ಷಿಣದ ಪ್ರಯಾಗ್ ರಾಜ್ ಎಂದು ಪ್ರಸಿದ್ಧಿ ಪಡೆದಿರುವ ತಿ.ನರಸೀಪುರದ ತಿರುಮ ಕೂಡಲು ತ್ರಿವೇಣಿ ಸಂಗಮದಲ್ಲಿ ಆರು ವರ್ಷಗಳ ಬಳಿಕ ನಾಳೆ ಕುಂಭಮೇಳ ನಡೆಯಲಿದೆ.ನಾಳೆಯಿಂದ ಮೂರು ದಿನಗಳ ಕಾಲ ನಡೆಯುವ ಪುಣ್ಯ ಸ್ನಾನಕ್ಕೆ ಲಕ್ಷಾಂತರ ಮಂದಿ ಆಗಮಿಸುವ ನಿರೀಕ್ಷೆ ಇದೆ. ಕಾವೇರಿ, ಕಪಿಲ, ಸ್ಪಟಿಕ ನದಿಗಳ ಪವಿತ್ರ ಸಂಗಮ ಸ್ಥಳವಾದ ತಿರುಮ ಕೂಡಲಿನಲ್ಲಿ ಮೈಸೂರು ಜಿಲ್ಲಾಡಳಿತ ಸಕಲ ಸಿದ್ಧತೆ ನಡೆಸಿದೆ.ಮೈಸೂರು, ಮಂಡ್ಯ, ಚಾಮರಾಜನಗರ ಸೇರಿದಂತೆ ಹಲವೆಡೆಯಿಂದ ಹೆಚ್ಚುವರಿಯಾಗಿ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಜಿಲ್ಲಾಡಳಿತದಿಂದ ೧೫ ಕ್ಕಿಂತ ಹೆಚ್ಚು ಬೋಟ್‌ಗಳ ವ್ಯವಸ್ಥೆ ಮಾಡಲಾಗಿದೆ. ಕುಂಭಮೇಳದ ಎರಡನೇ ದಿನ ಗಂಗಾರತಿ ಮಾದರಿಯಲ್ಲಿ ಮಹಾ ಆರತಿ ನಡೆಯಲಿದೆ.

ಕಾಲ್ತುಳಿತ ಉಂಟಾಗದಂತೆ ಪ್ರತ್ಯೇಕವಾಗಿ ಪ್ರವೇಶ ಮತ್ತು ನಿರ್ಗಮನಕ್ಕೆ ವ್ಯವಸ್ಥೆ ಮಾಡಲಾಗಿದೆ.

<><><><>

ರಾಜಕೀಯ, ಚುನಾವಣೆಗೆ ಮಾತ್ರ ಸೀಮಿತವಾಗಿರಲಿ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮನವಿ ಮಾಡಿದ್ದಾರೆ.

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಚಿಕ್ಕವೀರಕೊಪ್ಪಲು ಗ್ರಾಮದ ಊರಹಬ್ಬ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಚಿವರು,ರಾಜಕೀಯ ಕಾರಣದಿಂದ ಹಳ್ಳಿಗಳಲ್ಲಿ ಮಾನವ ಸಂಬಂಧಗಳು, ರಕ್ತ ಸಂಬಂಧಗಳು ಹಾಳಾಗುವುದು ಬೇಡ ಎಂದು ತಿಳಿಸಿದ್ದಾರೆ. ಮಾನವ ಸಂಬಂಧಗಳು, ರಕ್ತ ಸಂಬಂಧಗಳು ಹಳ್ಳಿಗಳಲ್ಲಿ ಗಾಢವಾಗಿದ್ದವು. ಈ ಕಾರಣದಿಂದ ಗ್ರಾಮಗಳು ನೆಮ್ಮದಿಯಾಗಿದ್ದವು. ಈಗ ಆ ನೆಮ್ಮದಿ ಸಂತೋಷ ದೂರವಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಹಳ್ಳಿ ಹಬ್ಬಗಳು, ಜಾತ್ರೆಗಳು ಜನರನ್ನು ಒಂದು ಮಾಡುವುದರ ಜೊತೆಗೆ ಸಾಮರಸ್ಯ ಮೂಡಿಸುತ್ತಿವೆ ಎಂದು ಗ್ರಾಮಸ್ಥರಿಗೆ ಕಿವಿಮಾತು ಹೇಳಿದ್ದಾರೆ.

<><><><>

ಬೆಂಗಳೂರಿನಲ್ಲಿ ನಮ್ಮ ಮೆಟ್ರೊ ದರ ಏರಿಕೆ ಖಂಡಿಸಿರುವ ಪ್ರತಿ ಪಕ್ಷ ನಾಯಕ ಆರ್. ಅಶೋಕ ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಪೆಟ್ರೋಲ್, ಡಿಸೇಲ್, ಹಾಲು, ಬಸ್ ದರ ಏರಿಕೆಯ ಬರೆಯಿಂದ ಈಗಾಗಲೇ ಹೈರಾಣಾಗಿರುವ ರಾಜ್ಯದ ಜನತೆಗೆ ಮೆಟ್ರೋ ದರವನ್ನು ಏಕಾಏಕಿ ಶೇಕಡ ೪೭ ರಷ್ಟು ಏರಿಸುವ ಮೂಲಕ ಸರ್ಕಾರ ಜನ ಸಾಮಾನ್ಯರ ಗಾಯದ ಮೇಲೆ ಮತ್ತೊಂದು ಬರೆ ಎಳೆದಿದೆ ಎಂದು ತಿಳಿಸಿದ್ದಾರೆ. ಸಾರ್ವಜನಿಕ ಸಾರಿಗೆಯನ್ನು ಪ್ರೋತ್ಸಾಹಿಸಿ ಬೆಂಗಳೂರಿನ ಟ್ರಾಫಿಕ್ ಸಮಸ್ಯೆ ಪರಿಸರ ಮಾಲಿನ್ಯಕ್ಕೆ ಪರಿಹಾರಕಂಡುಕೊಳ್ಳಬೇಕಾದ ಸರ್ಕಾರ ಜನರನ್ನು ಮೆಟ್ರೋದಿಂದ ವಿಮುಖರಾಗುವಂತೆ ಮಾಡಿದೆ. ಕೂಡಲೇ ಮೆಟ್ರೋ ದರ ಏರಿಕೆ ನಿರ್ಧಾರವನ್ನು ಹಿಂಪಡೆಯಬೇಕೆಂದು ಅವರು ಒತ್ತಾಯಿಸಿದ್ದಾರೆ.

<><><><>

೨೦೨೪-೨೫ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಖರೀದಿಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ ಬೆಂಬಲ ಬೆಲೆ ೭ ಸಾವಿರದ ೫೫೦ ರೂಪಾಯಿ ಜೊತೆಗೆ ರಾಜ್ಯ ಸರ್ಕಾರದ ಪ್ರೋತಾಹ ಧನ ೪೫೦ ರೂಪಾಯಿ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಸಂಬಂಧಿಸಿದ ಇಲಾಖೆಗೆ ತಕ್ಷಣದಿಂದ ಅಷ್ಠಾನಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಕ್ತ ನಿರ್ದೇಶನ ನೀಡಿದ್ದಾರೆ. ರಾಜ್ಯದ ಪ್ರಮುಖ ತೊಗರಿ ಬೆಳೆಯುವ ಜಿಲ್ಲೆಗಳಾದ ಕಲಬುರಗಿ, ಯಾದಗಿರಿ,

ಬೀದರ್, ರಾಯಚೂರು, ವಿಜಯಪುರ, ಕೊಪ್ಪಳ, ಬಳ್ಳಾರಿ, ವಿಜಯನಗರ, ಬಾಗಲಕೋಟೆ, ಬೆಳಗಾವಿ, ಚಿತ್ರದುರ್ಗ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಭಾಗದಲ್ಲಿ ಅಂದಾಜು ೩೩೦ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ರೈತರು ಬೆಂಬಲ ಬೆಲೆ ಯೋಜನೆಯ ಹಾಗೂ ರಾಜ್ಯ ಸರ್ಕಾರದ ಪ್ರೋತ್ಸಾಹ ಧನದ ಸುದುಪಯೋಗ ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಕಳಸ ತಾಲೂಕಿನ ಆನೆಗುಡ್ಡ ಅರಣ್ಯ ವ್ಯಾಪ್ತಿಯಲ್ಲಿ ಕಾಡ್ಗಿಚ್ಚು ಕಾಣಿಸಿಕೊಂಡಿದೆ. ಆನೆಗುಡ್ಡ ಪರ್ವತದ ಸುತ್ತ ಬೆಂಕಿ ಹೊತ್ತಿಕೊಂಡಿದೆ. ಸಾಕಷ್ಟು ಪ್ರಮಾಣದ ಸಸ್ಯ ಸಂಕುಲ ಬೆಂಕಿಯಿಂದ ನಾಶವಾಗಿದೆ. ಅತೀ ಎತ್ತರದ ಪ್ರದೇಶದಲ್ಲಿ ಬೆಂಕಿ ಹೊತ್ತಿಕೊಂಡಿದ್ದು ಅರಣ್ಯ ಇಲಾಖೆ ಸಿಬ್ಬಂದಿ ಡ್ರೋಣ್ ಕ್ಯಾಮೆರಾ ಮೂಲಕ ಪರಿಶೀಲನೆ ನಡೆಸಿದ್ದಾರೆ.

<><><><>

ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಕಟಿಬದ್ಧವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.ಮೈಸೂರಿನಲ್ಲಿ ನಿನ್ನೆ ಎಬಿವಿಪಿ ರಾಷ್ಟ್ರೀಯ ಏಕಾತ್ಮಕಾ ಯಾತ್ರೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ಈ ರಾಜ್ಯಗಳ ಶ್ರೇಯೋವೃದ್ಧಿಗೆ ಸುಮಾರು ಐದೂವರೆ ಲಕ್ಷ ಕೋಟಿ ರೂಪಾಯಿಗೂ ಅಧಿಕ ಮೊತ್ತವನ್ನು ವೆಚ್ಚಮಾಡಲಾಗಿದೆ ಎಂದು ತಿಳಿಸಿದ್ದಾರೆ. ೧೦ ವರ್ಷಗಳಲ್ಲಿ ೫ ಲಕ್ಷ ಕೋಟಿ ರೂಪಾಯಿ ಯೋಜನೆಗಳು ಜಾರಿಯಾಗಿದೆ ಎಂದು ಹೇಳಿದ್ದಾರೆ.

<><><><>

ಧಾರವಾಡ ತಾಲೂಕಿನ ಕ್ಯಾರಕೊಪ್ಪ ಗ್ರಾಮದ ಬಳಿ ಮರಕ್ಕೆ ಕ್ರೂಸರ್ ಡಿಕ್ಕಿ ಹೊಡೆದು ತೀವ್ರವಾಗಿ ಗಾಯಗೊಂಡಿದ್ದವರ ಪೈಕಿ ಇದೀಗ ಮೂವರು ಸಾವನ್ನಪ್ಪಿದ್ದಾರೆ. ಧಾರವಾಡದ ಹೊಸಯಲ್ಲಾಪುರ ಹಾಗೂ ಕೋಳಿಕೇರಿಯ ಸುಮಾರು ೧೪ ಮಂದಿ ಕ್ರೂಸರ್‌ನಲ್ಲಿ ಕಲಕೇರಿಗೆ ಮಹಿಳೆಯೊಬ್ಬರ ಶವ ಸಂಸ್ಕಾರಕ್ಕೆಂದು ಹೊರಟಿದ್ದರು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿದ ಕ್ರೂಸರ್ ಮರಕ್ಕೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ನಾಲ್ವರಿಗೆ ಗಂಭೀರ ಗಾಯವಾಗಿದ್ದು, ಕಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತು.ಧಾರವಾಡ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

<><><><>

ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಪದ್ದತಿ ನಿರ್ಮೂಲನೆಗೆ ಜನಸಾಮಾನ್ಯರಿಗೆ ಜಾಗೃತಿ ಮೂಡಿಸಲಾಗುತ್ತಿದ್ದು ಜೀತ ಪದ್ದತಿ ಕಂಡುಬಂದಲ್ಲಿ ಕಾನೂನು ಕ್ರಮ ಅನಿವಾರ್ಯ ಎಂದು ದಾವಣಗೆರೆ ಹೆಚ್ಚುವರಿ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಿಳಿಸಿದ್ದಾರೆ. ಬಾಲ ಕಾರ್ಮಿಕ ಪದ್ದತಿ ನಿರ್ಮೂಲನೆ ಜಾಗೃತಿ ರಥಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಗ್ರಾಮೀಣ ಪ್ರದೇಶದಲ್ಲಿ ಈ ಬಗ್ಗೆ ಹೆಚ್ಚು ಜಾಗೃತಿ ಮೂಡಿಸುವುದು ಅತ್ಯವಶ್ಯ ಎಂದು ಹೇಳಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿ

೧. ಚಿತ್ರದುರ್ಗದ ಬೃಹನ್ಮಠದ ಅನುಭವ ಮಂಟಪದಲ್ಲಿ ಆಯೋಜಿಸಲಾದ ಎರಡು ದಿನಗಳ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮದಲ್ಲಿ ಸಾಮೂಹಿಕ ಸ್ಪರ್ದೆಗಳ ವಿಭಾಗದಲ್ಲಿ ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲೂಕಿನ ಕುಸ್ಕೂರು ಸರಕಾರಿ ಪ್ರೌಢಶಾಲಾ ಮಕ್ಕಳು ಪ್ರಥಮ ಸ್ಥಾನ ಪಡೆದಿದ್ದಾರೆ.

<><><><>